# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 2021 (2330)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್.ಎಂ.ರಮೇಶಗೌಡ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ವಿಷಯ : ಅರಣ್ಯ ಇಲಾಖೆಯಲ್ಲಿ ಸಾರ್ವಜನಿಕ ಉದ್ಯೋಗ ನೇಮಕಾತಿಯ ಮೀಸಲಾತಿ ಕುರಿತು

(ಅ) ಅರಣ್ಯ ಇಲಾಖೆಯಲ್ಲಿ ಸಾರ್ವಜನಿಕ ಉದ್ಯೋಗ (ಹೈದರಾಬಾದ್ -ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ-2013ರಂತೆ ವಿವಿಧ ವೃಂದದಲ್ಲಿ ಗುರುತಿಸಿರುವ ಹುದ್ದೆಗಳು ಯಾವುವು ; (ವಿವರ ಮತ್ತು ಸಂಬಂಧಿಸಿದ ಅಧಿಸೂಚನೆ ಆದೇಶವನ್ನು ನೀಡುವುದು)

(ಆ) ಅರಣ್ಯ ರಕ್ಷಕ, ಉಪವಲಯ ಅರಣ್ಯ ಅಧಿಕಾರಿ ಮತ್ತು ವಲಯ ಅರಣ್ಯ ಅಧಿಕಾರಿ ಹುದ್ದೆಗೆ ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ ನೀಡಲು ಹುದ್ದೆಗಳನ್ನು ಗುರುತಿಸಲಾಗಿದೆಯೇ ; (ಮೀಸಲಾತಿ ಕೋರಿದ ನೌಕರರ ಸಂಖ್ಯೆ ಮತ್ತು ಮೀಸಲಾತಿಯನ್ನು ಪಡೆದ ನೌಕರರ ವಿವರವನ್ನು ನೀಡುವುದು)

(ಇ) ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿಯಡಿ ದಿನಾಂಕ: 01.01.2014ರಿಂದ ಈ ದಿನಾಂಕದವರೆಗೆ ಅರಣ್ಯ ರಕ್ಷಕ, ಉಪವಲಯ ಅರಣ್ಯ ಅಧಿಕಾರಿ ಮತ್ತು ವಲಯ ಅರಣ್ಯ ಅಧಿಕಾರಿ ಹುದ್ದೆಗೆ ನೇಮಕಾತಿ ಹೊಂದಿದ ಅಭ್ಯರ್ಥಿಗಳ ಸಂಖ್ಯೆ ಎಷ್ಟು ; (ನೇಮಕಾತಿ ಅಧಿಸೂಚನೆ ಮತ್ತು ಆಯ್ಕೆ ಪಟ್ಟಿಯನ್ನು ನೀಡುವುದು)

(ಈ) ಮೀಸಲಾತಿಯಡಿ ದಿನಾಂಕ: 01.01.2014ರಿಂದ ಈ ದಿನಾಂಕದವರೆಗೆ ಅರಣ್ಯ ರಕ್ಷಕ, ಉಪವಲಯ ಅರಣ್ಯ ಅಧಿಕಾರಿ ಮತ್ತು ವಲಯ ಅರಣ್ಯ ಅಧಿಕಾರಿ ಹುದ್ದೆ ಹಾಗೂ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಗೆ ಮುಂಬಡ್ತಿ ಪಡೆದಿರುವ ನೌಕರರ ಸಂಖ್ಯೆ ಎಷ್ಟು ; (ಆದೇಶದ ಪ್ರತಿಯನ್ನು ನೀಡುವುದು)

(ಉ) ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿಯಡಿ ದಿನಾಂಕ: 31.12.2020ರಂದು ಕರ್ತವ್ಯ ನಿರ್ವಹಿಸುತ್ತಿರುವ ಅರಣ್ಯ ರಕ್ಷಕ, ಉಪವಲಯ ಅರಣ್ಯ ಅಧಿಕಾರಿ ಮತ್ತು ವಲಯ ಅರಣ್ಯ ಅಧಿಕಾರಿ ಹುದ್ದೆ ಹಾಗೂ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ನೌಕರರು ಯಾರು ? (ಪೂರ್ಣ ಮಾಹಿತಿ/ನೇರ/ಸ್ಥಾನಪನ್ನ ಮುಂಬಡ್ತಿ/ಪ್ರಭಾರ ಮೀಸಲಾತಿ/ಸಾಮಾನ್ಯ, ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆಯ ವಿವರ ನೀಡುವುದು)